KATK010047762023

**<u>ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರವರ ನ್ಯಾಯಾಲಯದಲ್ಲಿ, ತುಮಕೂರು</u>**

**<u>ಸತ್ರ ಮೊಕದ್ದಮೆ.106/2023</u>**

ಪ್ರಾ.ಸಾ. ಃ **8**

ದೋ.ಸಾ. ಃ **9**

ದಿ**.27.05.2026.**

| | |
|---|---|
| ಹೆಸರು | ಃ ಮಂಜುನಾಥ |
| ತಂದೆಯ ಹೆಸರು | ಃ ಆಂಜನಪ್ಪ |
| ವಯಸ್ಸು | ಃ **37** ವರ್ಷ |
| ಉದ್ಯೋಗ | ಃ ಕೂಲಿ ಕೆಲಸ |
| ವಾಸಸ್ಥಳ | ಃ ಗುಬ್ಬಿ |

ಸಾಕ್ಷಿಯನ್ನು ಕರೆಸಿ, ಸತ್ಯಪ್ರತಿಜ್ಞೆಯ ಪ್ರಮಾಣವಚನ ಬೋಧಿಸಲಾಯಿತು.

**<u>ಮುಖ್ಯ ವಿಚಾರಣೆ ಃ ಮಾನ್ಯ ಸರ್ಕಾರಿ ಅಭಿಯೋಜಕರಿಂದ ಃ</u>**

1. ನಿಶಾನೆ ಪಿ5 ಅಮಾನತ್ತು ಮಹಜರಿನಲ್ಲಿ ನನ್ನ ಸಹಿ ಇದೆ. ಆ ಸಹಿಯನ್ನು ನಿಶಾನೆ ಪಿ5(ಎ) ಎಂದು ಗುರುತಿಸಲಾಯಿತು. 7 ವರ್ಷಗಳ ಹಿಂದೆ ನಾನು ದೇವಸ್ಥಾನದ ಗಲಾಟೆ ವಿಚಾರವಾಗಿ ಪೋಲೀಸ್ ಠಾಣೆಗೆ ಹೋಗಿದ್ದಾಗ ಪೋಲೀಸರು ನನ್ನ ಸಹಿ ತೆಗೆದುಕೊಂಡರು. ನನಗೆ ಜಯಮ್ಮ ಗೊತ್ತಿಲ್ಲ. ನನ್ನ ಸಮಕ್ಷಮ ಜಯಮ್ಮ ಯಾವುದೇ ಪುಸ್ತಕವನ್ನು ಹಾಜರುಪಡಿಸಿಲ್ಲ. ನಿಶಾನೆ ಪಿ5 ರಲ್ಲಿ ಏನು ಬರೆದಿದೆ ಎಂದು ಗೊತ್ತಿಲ್ಲ.

(ಈ ಸಾಕ್ಷಿಯು ಮಹಜರಿಗೆ ವಿರೋಧಾತ್ಮಕವಾಗಿ ಸಾಕ್ಷ್ಯ ನುಡಿದಿರುವುದರಿಂದ ಪ್ರತಿಕೂಲ ಪಕ್ಷಕಾರರು ತನ್ನ ಪಾಟೀ ಸವಾಲಿನಲ್ಲಿ ಕೇಳಬಹುದಾದ ಪ್ರಶ್ನೆಗಳನ್ನು ಈ ಸಾಕ್ಷಿಗೆ ಕೇಳಲು ಅನುಮತಿ ನೀಡಬೇಕೆಂದು ಸರಕಾರಿ ಅಭಿಯೋಜಕರು ಭಿನ್ನವಿಸಿರುತ್ತಾರೆ. ಈ ಪ್ರಕರಣದ ಕಾಗದ ಪತ್ರಗಳನ್ನು ಪರಿಶೀಲಿಸಿದಾಗ ಈ ಸಾಕ್ಷಿಯು ಮಹಜರಿಗೆ ವಿರೋಧಾತ್ಮಕವಾಗಿ ಸಾಕ್ಷ್ಯ ನುಡಿದಿರುವುದು ಕಂಡುಬರುತ್ತದೆ. ಆದ್ದರಿಂದ ಪ್ರತಿಕೂಲ ಪಕ್ಷಕಾರನು ತನ್ನ ಪಾಟೀ ಸವಾಲಿನಲ್ಲಿ ಕೇಳಬಹುದಾದ ಪ್ರಶ್ನೆಗಳನ್ನು ಈ ಸಾಕ್ಷಿಗೆ ಕೇಳಲು ಅಭಿಯೋಜನೆಗೆ ಅನುಮತಿ ನೀಡುವುದು ಸೂಕ್ತ ಮತ್ತು ನ್ಯಾಯೋಚಿತ ಎಂದು ಮನಗೊಂಡು ಅನುಮತಿ

ನೀಡಲಾಯಿತು).

**ಪಾಟೀ ಸವಾಲು ಮಾನ್ಯ ಸರ್ಕಾರಿ ಅಭಿಯೋಜಕರಿಂದ :**

2. ದಿ.26.07.2022 ರಂದು ಬೆಳಿಗ್ಗೆ 11.00-11.45 ಗಂಟೆಯವರೆಗೆ ಗುಬ್ಬಿ ಪೋಲೀಸ್ ಠಾಣೆಯಲ್ಲಿ ಮೃತೆ ಮಾಲರವರ ಕೈಬರಹ ಇರುವ ಪುಸ್ತಕವನ್ನು ಫಿರ್ಯಾದಿ ಜಯಮ್ಮ ಹಾಜರುಪಡಿಸಿದ ಮೇರೆಗೆ ಪೋಲೀಸರು ನನ್ನ ಸಮಕ್ಷಮ ನಿಶಾನೆ ಪಿ5 ಮಹಜರನ್ನು ಮಾಡಿ ಅದನ್ನು ಓದಿ ಹೇಳಿ ನನ್ನ ಸಹಿ ತೆಗೆದುಕೊಂಡಿದ್ದಾರೆ ಎಂದರೆ ಸರಿಯಲ್ಲ. ನನಗೆ ಈ ಎಲ್ಲಾ ವಿಚಾರ ಗೊತ್ತಿದ್ದರೂ ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲು ಶ್ರೀ.ಹೆಚ್.ಎನ್.ಗುರುನಂಜೇಗೌಡ, ವಕೀಲರಿಂದ ಆರೋಪಿತನ ಪರವಾಗಿ :**

ಇಲ್ಲ

(ಉಕ್ತಲೇಖನದಂತೆ ಬಹಿರಂಗ ನ್ಯಾಯಾಲಯದಲ್ಲಿ ಬೆರಳಚ್ಚುಗಾರರಿಂದ ಬೆರಳಚ್ಚು ಮಾಡಲ್ಪಟ್ಟಿತು).

ಓದಿ ಹೇಳಿ ಕೇ ಸರಿ ಇದೆ ಎಂದು ಒಪ್ಪಿದ್ದಾರೆ.

ಸಹಿ/-
ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು
ತುಮಕೂರು